**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**
**ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 88/2020**

**ಚಾ.ಸಾಃ 21, ಫ್ರಾ.ಸಾಃ 10**

| | |
|---|---|
| ಸಾಕ್ಷಿದಾರನ ಹೆಸರು | ಗಣೇಶ ನಾಯ್ಕ |
| ತಂದೆಯ ಹೆಸರು | ಹನುಮಂತ ನಾಯ್ಕ |
| ವಯಸ್ಸು | 61 ವರ್ಷ |
| ಉದ್ಯೋಗ | ನಿವೃತ್ತ ಪಿಎಸ್ಐ, |
| ವಾಸ್ತವ್ಯ | ಹೆಗಡೆ ಗ್ರಾಮ, ಕುಮಟಾ ತಾಲೂಕು |

**ಸಾಕ್ಷಿಯನ್ನು ದಿನಾಂಕಃ 24-10-2024 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಡಿಸೆಂಬರ್-2016ರಿಂದ ಜೂನ್ 2022ರ ವರೆಗೆ ಹೊನ್ನಾವರ ಠಾಣೆಯಲ್ಲಿ ಎಎಸ್ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 07-05-2019ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಬೆಳಿಗ್ಗೆ 11-30ಗಂಟೆಗೆ ನಾನು ಚಾಸಾ-1ರವರು ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.131/2019ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-5 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-11 ಎಂದು, ಸಾಕ್ಷಿ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು.

ನಂತರ ಈ ಪ್ರಕರಣದ ಕಡತವನ್ನು ಚಾಸಾ-22ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ವಿ.ಎಂ. ಭಂಡಾರಿಯವರಿಂದಃ**

ಚಾಸಾ-1ರವರು ದೂರನ್ನು ಬರೆದುಕೊಂಡು ತಂದಿದ್ದರು. ಎಲ್ಲಿ ಬರೆದಿದ್ದರು ನನಗೆ ಗೊತ್ತಿಲ್ಲ. ಪಿರ್ಯಾದಿಗೆ ಸಹಾಯ ಮಾಡಲು ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ. **ಸಹಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**